62

# ಕರ್ನಾಟಕ ಸರ್ಕಾರ

## ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಂಗಳೂರು ಇವರು ಹೊರಡಿಸಿದ ನಡವಳಿಗಳು

ವಿಷಯ: ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ 2368/2011 ಪ್ರಕರಣದಲ್ಲಿ ದಿನಾಂಕ: 09-02-2017ರ ತೀರ್ಪಿನ ಹಿನ್ನೆಲೆಯಲ್ಲಿ ಹಿರಿಯ ಮೇಲ್ವಿಚಾರಕಿಯರ ವೃಂದದ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಹೊರಡಿಸುವ ಬಗ್ಗೆ.

ಉಲ್ಲೇಖ:
1 ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾನಿಯಮ-1), ಸಿಆಸುಇ/ 182/ ಸೇನೆನಿ/2011, ದಿನಾಂಕ:06.05.2017.

2. ಮೇಲ್ವಿಚಾರಕಿಯರ ವೃಂದದ ನೌಕರರಿಗೆ ಹಿರಿಯ ಮೇಲ್ವಿಚಾರಕಿಯರ ವೃಂದಕ್ಕೆ ಸ್ಥಾನಪನ್ನ ಮುಂಬಡ್ತಿ ಆದೇಶ ಸಂಖ್ಯೆ: ಮಮಅ/ಸಿಬ್ಬಂದಿ/ಮೇಲ್ವಿ/2016-17 ದಿನಾಂಕ: 24.06.2016.

3. ಮೇಲ್ವಿಚಾರಕಿಯರ ವೃಂದದ ನೌಕರರಿಗೆ ಹಿರಿಯ ಮೇಲ್ವಿಚಾರಕಿಯರ ವೃಂದಕ್ಕೆ ಸ್ಥಾನಪನ್ನ ಮುಂಬಡ್ತಿ ತಿದ್ದುಪಡಿ ಆದೇಶ ಸಂಖ್ಯೆ: ನಿಸಿಮೇ/13/2016-17 ದಿನಾಂಕ: 02.07.2016.

4. ಕರ್ನಾಟಕ ರಾಜ್ಯಪತ್ರ ಸಂಖ್ಯೆ: ಡಬ್ಲೂಸಿಡಿ/150/ಎಸ್‌ಜೆಡಿ/2007 ದಿನಾಂಕ : 04.03.2013

ಪ್ರಸ್ತಾವನೆ: ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ 2368/2011 ಬಿ.ಕೆ. ಪವಿತ್ರ ಮತ್ತು ಇತರರ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ದಿನಾಂಕ:09.02.2017 ರಂದು ನೀಡಿರುವ ತೀರ್ಪಿನಲ್ಲಿ ರಾಜ್ಯ ಸರ್ಕಾರದ ನಾಗರೀಕ ಸೇವೆಗಳನ್ನು **"Karnataka Determination of Seniority of Govt servants promoted on the basis of Reservation Act 2002"** ರ ಸೆಕ್ಷನ್ 3 ಮತ್ತು 4ನ್ನು ಸಂವಿಧಾನದ ಅನುಚ್ಛೇಧ 14 ಮತ್ತು 16 ನ್ನು ಆಧಿಕಾರಾತೀತ (**ultra vires**) ಎಂದು ಆದೇಶಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಉಲ್ಲೇಖ(1)ರ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಆದೇಶದಲ್ಲಿ ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ಅನುಗುಣವಾಗಿ ದಿನಾಂಕ: 27.04.1978 ರಿಂದ 01.01.2017 ರವರೆಗೆ ನೀಡಿರುವ ಮುಂಬಡ್ತಿಗಳಲ್ಲಿ ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡ ನೌಕರರಿಗೆ ಮೀಸಲಾತಿ ಅನುಸರಿಸಿರುವ ಅಧಿಕಾರಿಗಳ/ನೌಕರರ ಜೇಷ್ಠತಾ ಪಟ್ಟಿಗಳನ್ನು ಪುನರ್‌ಪರಿಶೀಲಿಸಲು ಆದೇಶಿಸಲಾಗಿದೆ. ಅದರಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ದಿನಾಂಕ: 27.04.1978 ರಿಂದ 01.01.2017 ರವರೆಗೆ ಹೊರಡಿಸಲಾಗಿರುವ ಅಧಿಕಾರಿ/ನೌಕರರ ಜೇಷ್ಠತೆ ಪುನರ್ ಪರಿಶೀಲಿಸಿ, ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಹೊರಡಿಸಬೇಕಿದೆ. ಪುನರ್‌ಪರಿಶೀಲನೆ ಕಾರ್ಯ ಕೈಗೊಳ್ಳಲು ಉಲ್ಲೇಖ (4) ರ ಸರ್ಕಾರದ ಅದೇಶದನ್ವಯ ಉಲ್ಲೇಖ(2) ಮತ್ತು (3) ರ ಮುಂಬಡ್ತಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಇವುಗಳನ್ನು ಆಧರಿಸಿ ಗ್ರೂಪ್- 'ಸಿ' ಹಿರಿಯ ಮೇಲ್ವಿಚಾರಕಿಯರ ವೃಂದದ ಜ್ಯೇಷ್ಠತೆಯನ್ನು ಪುನರ್‌ಪರಿಶೀಲಿಸಿ, ಅನುಬಂಧ-1 ರಿಂದ 3ರ ವರೆಗೆ ಸಂಬಂದಪಟ್ಟ ನೌಕರರುಗಳ ಮಾಹಿತಿಗಾಗಿ ವೆಬ್ ಸೈಟ್ ಸಂಖ್ಯೆ: http://dwcdkar.gov.in ಪ್ರಕಟಿಸಿ, ಸೇವಾ ಮಾಹಿತಿಯಲ್ಲಿ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ಅಂತಹ ನೌಕರರು ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಬೇಕಾಗಿರುತ್ತದೆ. ನಂತರ ಅರ್ಹ